ಅ) ಗ್ರಾಮೀಣ ಪ್ರದೇಶಗಳ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ನಿಜವಲ್ಲವೆ,

ಇ) ಹಾಗಿದ್ದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಸವರಾಜ್ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಚಿಂತಾಮಣಿ ತಾಲ್ಲೂಕಿನಲ್ಲಿ ಒಟ್ಟು 13 ಪದವಿ ಪೂರ್ವ ಕಾಲೇಜುಗಳಿದ್ದು, ಅವುಗಳಲ್ಲಿ 05 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು, 08 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳೂ ಇವೆ ಕೆಂಚಾರ್ಲಹಳ್ಳಿ ಮತ್ತು ಯಗವಕೋಟೆಯ ಸುತ್ತಮುತ್ತಲಿನ ಗ್ರಾಮಗಳಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲ

ಆ) ನಿಜ

ಇ) ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆಗಳನ್ನು ಹತ್ತಿರದ ಪ್ರೌಢಶಾಲೆಗಳಿಂದ ಎಸ್ ಎಸ್ ಎಲ್ ಸಿ ಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ, ಕಟ್ಟಡ ಹಾಗೂ ಇತರ ಮೂಲಭೂತ ಸೌಲಭ್ಯ, ಶೈಕ್ಷಣಿಕ ಅಗತ್ಯತೆ, ವಾರ್ಷಿಕ ಅನುದಾನದಲ್ಲಿನ ಹಣಕಾಸಿನ ಲಭ್ಯತೆಗಳನ್ನು ಆಧರಿಸಿ, ಹಂತ ಹಂತವಾಗಿ ಮಂಜೂರು ಮಾಡಲಾಗುತ್ತಿದೆ

1648 (2226) ಶ್ರೀ ಡಾ॥ ಸುಧಾಕರ್ ಎಂ ಸಿ (ಚಿಂತಾಮಣಿ) – ಮಾನ್ಯ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೇಳೂರು ಗ್ರಾಮವು ಆಂದ್ರಪ್ರದೇಶದ ಗಡಿ ಭಾಗದಲ್ಲಿರುವುದಲ್ಲದೆ ಪಟ್ಟಣಗಳಿಗೆ ಸುಮಾರು 35 ಕಿ ಮೀ ದೂರದಲ್ಲಿರುವುದರಿಂದ ಈ ಗ್ರಾಮಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ನಿಜವಲ್ಲವೆ,

ಆ) ಹಾಗಿದ್ದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಸವರಾಜ್ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೇಳೂರು ಗ್ರಾಮದಲ್ಲಿದ್ದ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ವಿದ್ಯಾರ್ಥಿಗಳ ದಾಖಲಾತಿಯ ಕೊರತೆಯಿಂದ ಬೇರೆ ಕಡೆಗೆ ಸ್ಥಳಾಂತರಿಸಲಾಗಿದೆ ಸದ್ಯಕ್ಕೆ ಸದರಿ ಗ್ರಾಮಕ್ಕೆ ಕಾಲೇಜಿನ ಅಗತ್ಯತೆಯ ಬಗ್ಗೆ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲ

ಆ) ಉದ್ಭವಿಸುವುದಿಲ್ಲ

1649 (2118) ಶ್ರೀ ಸುನೀಲ್ ಕುಮಾರ್ ವಿ (ಕಾರ್ಕಳ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಹೆಸರನ್ನು ಬದಲಾವಣೆ ಮಾಡುವುದರ ಮೂಲಕ ಪುನರ್‌ವಿಂಗಡಿಸಲು ಸರ್ಕಾರ ನಿರ್ಧರಿಸಿದೆಯೇ,

ಆ) ಹಾಗಿದ್ದಲ್ಲಿ , ಎಂದಿನಿಂದ ಜಾರಿಗೆ ತರಲಾಗುವುದು,

ಇ) ಇದಕ್ಕೆ ಪ್ರತ್ಯೇಕ ಕಾರ್ಯದರ್ಶಿಯನ್ನೊಳಗೊಂಡ ಸಚಿವಾಲಯವನ್ನು ಸ್ಥಾಪಿಸಲು ಉದ್ದೇಶಿಸಿದೆಯೇ?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಇಂತಹ ಯಾವುದೇ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ